**ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ಇವರ ನಡವಳಿಗಳು**

**ವಿಷಯ:-** ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ **08** ಇಂಜಿನಿಯರಿಂಗ್ ಕಾಲೇಜುಗಳ **842** ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ 2023-24 ನೇ ಸಾಲಿನ ಜುಲೈ 2023 ರಿಂದ ಆಕ್ಟೋಬರ್ 2023 ರವರೆಗಿನ ತುಟ್ಟಿಭತ್ಯೆ ವ್ಯತ್ಯಾಸದ ಬಾಬ್ತು ನೀಡಬೇಕಾಗಿರುವ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

**ಉಲ್ಲೇಖ:-**

1. ಸರ್ಕಾರಿ ಆದೇಶ ಸಂಖ್ಯೆ:ಇಡಿ/184/ಟಿಪಿಇ/2009, ದಿ:27.07.2009.
2. ಸರ್ಕಾರದ ಸುತ್ತೋಲೆ ಸಂ: ಆಇ 34 ಟಿ.ಎ.ಆರ್ 2020, ದಿನಾಂಕ 05-01-2022.
3. ಸರ್ಕಾರದ ಆದೇಶ ಸಂಖ್ಯೆ: ಆಇ 19 ಎಸ್‌ಆರ್‌ಪಿ 2023, ದಿನಾಂಕ:21.10.2023.
4. ಸರ್ಕಾರದ ಆದೇಶ ಸಂಖ್ಯೆ: ಆಇ 21 ಎಸ್‌ಆರ್‌ಪಿ 2023, ದಿನಾಂಕ:26.10.2023.

**ಪ್ರಸ್ತಾವನೆ:**

ಮೇಲೆ ನಮೂದಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ(1)ರ ಸರ್ಕಾರದ ಆದೇಶದಲ್ಲಿ ಸರ್ಕಾರವು ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಖಾಸಗಿ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು ಸಿಬ್ಬಂದಿಗಳಿಗೆ ಸರ್ಕಾರದಿಂದ ಬಿಡುಗಡೆ ಮಾಡುವ ಶೇ.85ರಷ್ಟು ಸಹಾಯಾನುದಾನವನ್ನು ಪ್ರತಿ ತಿಂಗಳು ರಾಷ್ಟ್ರೀಕೃತ ಬ್ಯಾಂಕ್‌ಗೆ ಜಮೆ ಮಾಡುವ ಮೂಲಕ ಸಿಬ್ಬಂದಿ ವರ್ಗದವರುಗಳಿಗೆ (ಬೋಧಕ ಮತ್ತು ಬೋಧಕೇತರ) ವಿತರಿಸಲು ಸರ್ಕಾರವು ಅನುಮತಿಸಿರುತ್ತದೆ. ಹಾಗೂ ಈ ಸಂಬಂಧ ಮುಂದಿನ ಅಗತ್ಯ ಕ್ರಮವನ್ನು ತಾಂತ್ರಿಕ ಶಿಕ್ಷಣ ನಿರ್ದೇಶಕರು ಕೈಗೊಳ್ಳಲು ಆದೇಶಿಸಿರುತ್ತದೆ.

ಉಲ್ಲೇಖ (2) ರ ಸರ್ಕಾರದ ಸುತ್ತೋಲೆ ಪತ್ರದಲ್ಲಿ ಸರ್ಕಾರದಿಂದ ವೇತನ ಸಹಾಯಾನುದಾನ ಪಡೆಯುತ್ತಿರುವ ಎಲ್ಲಾ ನಿಗಮ/ಮಂಡಳಿ/ನಿಯಮಿತ/ವಿಶ್ವವಿದ್ಯಾಲಯಗಳು ಮತ್ತು ಇನ್ನಿತರ ಸ್ವಾಯತ್ತ ಸಂಸ್ಥೆಗಳು ಮಾರ್ಚ್ 2022 ರೊಳಗಾಗಿ ಕಡ್ಡಾಯವಾಗಿ ಹೆಚ್.ಆರ್.ಎಂ.ಎಸ್ ನಲ್ಲಿ ಸಿಬ್ಬಂದಿ ವಿವರಗಳನ್ನು ದಾಖಲಿಸುವಂತೆ ತಿಳಿಸಲಾಗಿದೆ. ಅದರಂತೆ ಮಾರ್ಚ್ 2022 ರಿಂದ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳಿಗೆ ವೇತನವನ್ನು ಹೆಚ್.ಆರ್.ಎಂ.ಎಸ್ ಮೂಲಕ ಬಿಡುಗಡೆ ಮಾಡಲಾಗಿದೆ.

ಉಲ್ಲೇಖ (3) ಮತ್ತು (4) ರಲ್ಲಿ ಖಾಸಗಿ ಅನುದಾನಿತ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎ.ಐ.ಸಿ.ಟಿ.ಇ ನೌಕರರುಗಳಿಗೆ (42% ರಿಂದ 46%) ಹಾಗೂ ರಾಜ್ಯ ಸರ್ಕಾರಿ ನೌಕರರುಗಳಿಗೆ (35% ರಿಂದ 38.75%) ತುಟ್ಟಿ ಭತ್ಯೆಯ ದರವನ್ನು ಪರಿಷ್ಕರಿಸಿ ಸರ್ಕಾರವು ಆದೇಶಿಸಿರುತ್ತಾರೆ.

ಕೇಂದ್ರ ಕಛೇರಿಯ ಹೆಚ್.ಆರ್.ಎಂ.ಎಸ್ ವಿಭಾಗದವರು ಕಡತ ಸಂ:DTE-CDC0EGU/11/2023-EGOV- DEPT TECH EDUCATION (E:1128031) ರಲ್ಲಿ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ **842** ಬೋಧಕ/ಬೋಧಕೇತರ ಸಿಬ್ಬಂದಿಗಳ ಜುಲೈ 2023 ರಿಂದ ಆಕ್ಟೋಬರ್ 2023 ರವರೆಗಿನ ತುಟ್ಟಿಭತ್ಯೆ ವ್ಯತ್ಯಾಸದ ಬಾಬ್ತು ರೂ. **95,78,040/-** ಗಳನ್ನು ಖಜಾನೆ-2 ತಂತ್ರಾಂಶದ ನಮೂನೆಯನ್ನು ಸಲ್ಲಿಸಿರುತ್ತಾರೆ. ಆದುದರಿಂದ **08** ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ **842** ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ತುಟ್ಟಿಭತ್ಯೆ ವ್ಯತ್ಯಾಸದ ಬಾಬ್ತು ಬಿಡುಗಡೆ ಮಾಡಬಹುದಾಗಿದೆ

2023-24 ನೇ ಸಾಲಿಗೆ ಸರ್ಕಾರವು ಒದಗಿಸಿರುವ ಅನುದಾನದಲ್ಲಿ **08** ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಒಟ್ಟು **842** ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ಜುಲೈ 2023 ರಿಂದ ಆಕ್ಟೋಬರ್ 2023 ರವರೆಗಿನ ತುಟ್ಟಿಭತ್ಯೆ ವ್ಯತ್ಯಾಸದ ಸರ್ಕಾರದ ಪಾಲಿನ ಶೇ.85 ರಷ್ಟು ವೇತನಾನುದಾನ ರೂ. **95,78,040/-** ಗಳನ್ನು 2023-24 ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ 2203-00-112-0-07-101 ರಡಿ ಖಜಾನೆ-2 ತಂತ್ರಾಂಶದ ಮುಖಾಂತರ ಬಿಡುಗಡೆಗೊಳಿಸಲು ತೀರ್ಮಾನಿಸಲಾಗಿದೆ.

ಆದುದರಿಂದ, ಈ ಕೆಳಕಂಡ ಆದೇಶ,

**ಕಛೇರಿ ಆದೇಶ ಸಂ: ಡಿಟಿಇ 25 ಜಿ.ಆರ್.ಟಿ (2) 2022, ಬೆಂಗಳೂರು, ದಿನಾಂಕ: 16-03-2024**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ 08 ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಒಟ್ಟು **842** ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ಜುಲೈ 2023 ರಿಂದ ಆಕ್ಟೋಬರ್ 2023 ರವರೆಗಿನ ತುಟ್ಟಿ ಭತ್ಯೆ ವ್ಯತ್ಯಾಸದ ಸರ್ಕಾರದ ಪಾಲಿನ ಶೇ.85 ರಷ್ಟು ವೇತನಾನುದಾನ ರೂ. **95,78,040/-** **(ರೂಪಾಯಿ ತ್ತೊಂಬತ್ತೈದು ಲಕ್ಷದ ಎಪ್ಪತ್ತೆಂಟು ಸಾವಿರದ ನಲವತ್ತು ಮಾತ್ರ)** ಗಳನ್ನು ಖಜಾನೆ-2 ತಂತ್ರಾಂಶದ ಮೂಲಕ 2023-24 ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ 2203-00-112-0-07-101 ರಡಿ ಬಿಡುಗಡೆ ಮಾಡಿ ಆದೇಶಿಸಿದ್ದು, ಸದರಿ ಖರ್ಚನ್ನು ಲೆಕ್ಕ ಶೀರ್ಷಿಕೆ 2203-00-112-0-07-101 ರಡಿಯಲ್ಲಿ ಭರಿಸಲು ಕೂಡ ಆದೇಶಿಸಲಾಗಿದೆ.

| Sl. No. | NAME OF THE INSTITUTION | EST NO. | AICTE Employees 42% to 46% | State Employees 35% to 38.75% | Total Employees | AICTE | State | Total | HRMS Bill NO. |
|---|---|---|---|---|---|---|---|---|---|
| 1 | P E S College of Engg Mandya | 3 | 51 | 73 | 124 | 809949 | 285844 | 1095793 | HG2312893272 |
| 2 | SJCE , Mysore | 6 | 49 | 64 | 113 | 970019 | 261228 | 1231247 | HG2312893672 |
| 3 | Dr Ambedkar Institute of Technology Bengaluru | 7 | 64 | 109 | 173 | 1432610 | 560572 | 1993182 | HG2312894552 |
| 4 | Basaveshwara Engineering College | 8 | 35 | 49 | 84 | 766630 | 215482 | 982112 | HG2401905305 |
| 5 | Malnad college of Engineering Hassan | 4 | 48 | 44 | 92 | 939488 | 173732 | 1113220 | HG2312893409 |
| 6 | PDA college of Engg Kalburgi | 5 | 47 | 45 | 92 | 923162 | 193940 | 1116702 | HG2312893670 |
| 7 | BMS College of Engg Bengaluru | 9 | 50 | 48 | 98 | 1054351 | 202006 | 1256357 | HG2312894632 |
| 8 | The National Institute of Engg Mysuru | 11 | 38 | 28 | 66 | 666347 | 123080 | 789427 | HG2402928613 |
| | **TOTAL** | | **382** | **460** | **842** | **7562556** | **2015884** | **9578040** | |

ಈಗ ಬಿಡುಗಡೆ ಮಾಡಿರುವ ಜುಲೈ 2023 ರಿಂದ ಆಕ್ಟೋಬರ್ 2023 ರವರೆಗಿನ ತುಟ್ಟಿಭತ್ಯೆ ವ್ಯತ್ಯಾಸದ ಸರ್ಕಾರದ ಪಾಲಿನ ವೇತನಾನುದಾನ ಒಟ್ಟು ರೂ. **95,78,040/-** **(ರೂಪಾಯಿ ತ್ತೊಂಬತ್ತೈದು ಲಕ್ಷದ ಎಪ್ಪತ್ತೆಂಟು ಸಾವಿರದ ನಲವತ್ತು ಮಾತ್ರ)** ಗಳನ್ನು ಸಿ.ಟಿ.ಎಸ್-13 ಬಳಸಿ ಖಜಾನೆ-2 ರಲ್ಲಿ ವೆಚ್ಚ ಭರಿಸಲು ಆದೇಶಿಸಲಾಗಿದೆ.

**ಷರತ್ತು ಮತ್ತು ನಿಬಂಧನೆಗಳು:-**

1. ಇಂಜಿನಿಯರಿಂಗ್ ಕಾಲೇಜುಗಳಿಗೆ ಸಂಬಂಧಪಟ್ಟಂತೆ ಸಹಾಯಾನುದಾನವನ್ನು ಸರ್ಕಾರದ ಪಾಲಿನ ಶೇ.85ರಷ್ಟು ವೇತನವನ್ನು ಪರಿಗಣಿಸಲಾಗಿದೆ. ಈ ಸಹಾಯಾನುದಾನ ಬಿಡುಗಡೆಯು ಇಲಾಖೆಯ ಲೆಕ್ಕ ತಪಾಸಣೆಗೆ ಒಳಪಟ್ಟಿರುತ್ತದೆ.
2. ಆಡಳಿತ ಮಂಡಳಿಯ ಪಾಲಿನ ಶೇ.15ರ ಮೊತ್ತವನ್ನು ಸಿಬ್ಬಂದಿಗಳ ಖಾತೆಗಳಿಗೆ ಪಾವತಿಸತಕ್ಕದ್ದು.
3. ಯಾವೊಬ್ಬ ನೌಕರನಿಗೆ ಹೆಚ್ಚಿನ ಅನುದಾನ ಪಾವತಿಯಾಗಿದ್ದು ಕಂಡು ಬಂದಲ್ಲಿ, ಅಂತಹ ನೌಕರನಿಂದ ನೀಡಲಾಗಿರುವ ಹೆಚ್ಚುವರಿ ಮೊತ್ತವನ್ನು ನೇರವಾಗಿ ವಸೂಲಿ ಮಾಡಲಾಗುವುದು.
4. 2023-24ನೇ ಸಾಲಿನಲ್ಲಿ ಇಲಾಖೆಯಿಂದ ಬಿಡುಗಡೆಯಾಗಿರುವ ಅನುದಾನದ ಬಗ್ಗೆ 'ಬಳಕೆ ಪ್ರಮಾಣ ಪತ್ರ' ಹಾಗೂ 'ಸಿಎ' ದೃಢೀಕೃತ ಲೆಕ್ಕ ಪರಿಶೋಧನಾ ವರದಿಯನ್ನು ಕ.ಆ.ಸಂಹಿತೆ ಅನುಚ್ಛೇದ 161ರ ಅನ್ವಯ ಇಲಾಖೆಗೆ ಸಲ್ಲಿಸತಕ್ಕದ್ದು.
5. ಪ್ರತಿ ತಿಂಗಳು ಶಾಸನ ಬದ್ಧ ಕಟಾವುಗಳನ್ನು ಮಾಡಿ ಆಯಾ/ಸಂಬಂಧಪಟ್ಟ ಇಲಾಖೆಗಳಿಗೆ ತಪ್ಪದೆ ಕಡ್ಡಾಯವಾಗಿ ಕಳುಹಿಸಿ ಈ ಕಛೇರಿಗೆ ಮಾಹಿತಿ ಸಲ್ಲಿಸತಕ್ಕದ್ದು.

6. ಈಗ ಬಿಡುಗಡೆ ಮಾಡಿರುವ ಅನುದಾನ ಮೊತ್ತದ ಖರ್ಚನ್ನು 2023-24ನೇ ಸಾಲಿನ ಕೆಳಕಂಡ ಲೆಕ್ಕ ಶೀರ್ಷಿಕೆಯಲ್ಲಿ ಭರಿಸತಕ್ಕದ್ದು. ಲೆಕ್ಕಶೀರ್ಷಿಕೆ 2203- ತಾಂತ್ರಿಕ ಶಿಕ್ಷಣ -00-112-ಸರ್ಕಾರೇತರ ತಾಂತ್ರಿಕ ಕಾಲೇಜು ಮತ್ತು ಸಂಸ್ಥೆಗಳಿಗೆ ಸಹಾಯ-0-07 ಸರ್ಕಾರೇತರ ತಾಂತ್ರಿಕ ಶಾಲೆಗಳು-101-ಸಹಾಯಾನುದಾನ (2203-00-112-0-07-101).

'ಕರಡು ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ'

**ನಿರ್ದೇಶಕರು**
**ತಾಂತ್ರಿಕ ಶಿಕ್ಷಣ ಇಲಾಖೆ**

**ಇವರಿಗೆ:**

1) ಆಯುಕ್ತಾಲಯದ ಬಿಎಲ್ಎಸ್ (3).
2) ಮೇಲ್ಕಂಡ ಅನುಬಂಧದಲ್ಲಿ ತಿಳಿಸಿರುವ ಪ್ರಾಚಾರ್ಯರುಗಳಿಗೆ.

**ಪ್ರತಿ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸ್ಪೆಷಲ್ ಸೆಲ್, ಮಹಾಲೇಖಪಾಲರ ಕಛೇರಿ, ಬೆಂಗಳೂರು
3. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ಖಜಾನೆ, ಬೆಂಗಳೂರು.
4. ತಾಂತ್ರಿಕ ಶಿಕ್ಷಣ ಕೇಂದ್ರ ಕಛೇರಿ(ಅ) ಲೆಕ್ಕಾಧಿಕಾರಿಗಳು [ಬಿಲ್ಸ್] (ಆ) ನಗದು ಶಾಖೆ (ಇ) ಬಿಲ್ಸ್ ವಿಭಾಗಕ್ಕೆ (ಉ) ತಾಂತ್ರಿಕ ಶಿಕ್ಷಣ ಕೇಂದ್ರ ಕಛೇರಿ ಇ-ಗವರ್ನೆನ್ಸ್ ವಿಭಾಗ- ಮಾಹಿತಿಗಾಗಿ ಹಾಗೂ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರ ಪಡಿಸಲು.